**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

05.03.2026 13.10 hrs

********

**ಮುಖ್ಯಾಂಶಗಳು :**

1. ನವದೆಹಲಿಯಲ್ಲಿಂದು ೧೧ನೇ ರೈಸಿನಾ ಸಂವಾದಕ್ಕೆ ಚಾಲನೆ ನೀಡಲಿರುವ ಪ್ರಧಾನಿ ನರೇಂದ್ರ ಮೋದಿ; ಫಿನ್‌ಲ್ಯಾಂಡ್ ಅಧ್ಯಕ್ಷರಿಂದ ಮುಖ್ಯ ಭಾಷಣ
2. ಬಿಹಾರ್ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆ ; ರಾಜ್ಯಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಾಗಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಘೋಷಣೆ
3. ಭಾರತದ ಬ್ಯಾಂಕಿಂಗ್ ಮಾದರಿಯಲ್ಲಿ ಮಹಿಳಾ ಆರ್ಥಿಕ ಒಳಗೊಳ್ಳುವಿಕೆ ಬಗ್ಗೆ ವಿಶ್ವಸಂಸ್ಥೆ ಶ್ಲಾಘನೆ
4. ಪಶ್ಚಿಮ-ಏಷ್ಯಾ ಸಂಘರ್ಷ ; ಟೆಹ್ರಾನ್‌ನಲ್ಲಿನ ಇರಾನ್ ಮೂಲಸೌಕರ್ಯ ಗುರಿಯಾಗಿಸಿ ಇಸ್ರೇಲ್ ದಾಳಿ
5. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್ ; ೨ನೇ ಸೆಮಿಫೈನಲ್‌ನಲ್ಲಿಂದು ಭಾರತ - ಇಂಗ್ಲೆಂಡ್ ಹಣಾಹಣಿ

**********

ಭಾರತದ ಪ್ರಮುಖ ಭೌಗೋಳಿಕ ರಾಜಕೀಯ ಮತ್ತು ಆರ್ಥಿಕ ಸಮ್ಮೇಳನವಾದ ರೈಸಿನಾ ಸಂವಾದದ ೧೧ನೇ ಆವೃತ್ತಿ ನವದೆಹಲಿಯಲ್ಲಿ ನಡೆಯುತ್ತಿದ್ದು, ಇದರ ಭಾಗವಾಗಿ ಹಲವು ಜಾಗತಿಕ ವಿಷಯಗಳ ಕುರಿತ ಅಧಿವೇಶನಗಳು ಪ್ರಗತಿಯಲ್ಲಿವೆ. ಮೂರು ದಿನಗಳ ಕಾಲ ನಡೆಯಲಿರುವ ಈ ಜಾಗತಿಕ ಸಮ್ಮೇಳನದಲ್ಲಿ ವಿಶ್ವದ ವಿವಿಧ ದೇಶಗಳ ನಾಯಕರು, ನೀತಿ ನಿರೂಪಕರು ಮತ್ತು ತಜ್ಞರು ಒಂದೇ ವೇದಿಕೆಯಡಿ ಒಟ್ಟು ಗೂಡಲಿದ್ದು, ಪ್ರಸಕ್ತ ಅಂತಾರಾಷ್ಟ್ರೀಯ ಸವಾಲುಗಳು ಮತ್ತು ಕಾರ್ಯತಂತ್ರದ ಸಹಕಾರದ ಕುರಿತು ಸುದೀರ್ಘ ಚರ್ಚೆ ನಡೆಸಲಿದ್ದಾರೆ. ಇಂದು ಸಂಜೆ ನಡೆಯಲಿರುವ ರೈಸಿನಾ ಸಂವಾದದ ಅಧಿಕೃತ ಉದ್ಘಾಟನಾ ಅಧಿವೇಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಈ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಸಮಾರಂಭದಲ್ಲಿ ಫಿನ್‌ಲ್ಯಾಂಡ್ ಅಧ್ಯಕ್ಷ ಡಾ.ಅಲೆಗ್ಸಾಂಡರ್ ಸ್ಟಬ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮುಖ್ಯ ಭಾಷಣ ಮಾಡಲಿದ್ದಾರೆ. ೨೦೨೬ರ ಈ ಆವೃತ್ತಿಯು 'ಸಂಸ್ಕಾರ - ಪ್ರತಿಪಾದನೆ, ಹೊಂದಾಣಿಕೆ, ಪ್ರಗತಿ' ಎಂಬ

ಪರಿಕಲ್ಪನೆಯಡಿ ನಡೆಯುತ್ತಿದ್ದು, ಇದು ಪ್ರಸ್ತುತ ಜಾಗತಿಕ ವಿದ್ಯಮಾನಗಳ ಪ್ರತಿಬಿಂಬವಾಗಿದೆ. ಅಬ್ಸರ್ವರ್ ರಿಸರ್ಚ್ ಫೌಂಡೇಶನ್ ಮತ್ತು ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

**********

ನವದೆಹಲಿಯ ಹೈದರಾಬಾದ್ ಭವನದಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಭಾರತ ಭೇಟಿಯಲ್ಲಿರುವ ಫಿನ್‌ಲ್ಯಾಂಡ್ ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್ ಅವರನ್ನು ಭೇಟಿಯಾದರು. ಈ ವೇಳೆ ಉಭಯ ನಾಯಕರು ವಿವಿಧ ಕ್ಷೇತ್ರಗಳಾದ್ಯಂತ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಿದ್ದಾರೆ. ಇದೇ ವೇಳೆ ಅವರು, ಪ್ರಾದೇಶಿಕ ಹಾಗೂ ಜಾಗತಿಕ ಹಿತಾಸಕ್ತಿಯ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಂಡಿದ್ದಾರೆ. ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಕೂಡ ನವದೆಹಲಿಯಲ್ಲಿ ಅಧ್ಯಕ್ಷ ಅಲೆಗ್ಸಾಂಡರ್ ಸ್ಟಬ್ ಅವರನ್ನು ಭೇಟಿಯಾದರು. ಫಿನ್‌ಲ್ಯಾಂಡ್ ಅಧ್ಯಕ್ಷರೊಂದಗಿನ ಭೇಟಿ ಭಾರತ-ಫಿನ್‌ಲ್ಯಾಂಡ್ ಬಾಂಧವ್ಯಗಳನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಹಾಗೂ ಸಂಜೆ ರೈಸಿನಾ ಸಂವಾದದಲ್ಲಿ ಫಿನ್‌ಲ್ಯಾಂಡ್ ಅಧ್ಯಕ್ಷರ ಭಾಷಣವನ್ನು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ಅಲೆಕ್ಸಾಂಡರ್ ಸ್ಟಬ್, ಅಧ್ಯಕ್ಷರಾದ ನಂತರ ಭಾರತಕ್ಕೆ ನೀಡುತ್ತಿರುವ ಮೊದಲ ಅಧಿಕೃತ ಭೇಟಿ ಇದಾಗಿದೆ. ಇಂದು ಅವರು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಇದರ ಜೊತೆಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಕೂಡ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಲಿದ್ದಾರೆ.

**********

ಬಿಹಾರ್ ರಾಜಕಾರಣದ ಮಹತ್ವದ ಬೆಳವಣಿಗೆಯೊಂದರಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ರಾಜ್ಯಸಭಾ ಚುನಾವಣೆಗೆ ಸ್ಪರ್ಧಿಸುವುದಾಗಿ ಘೋಷಿಸಿದ್ದಾರೆ. ಈ ಮೂಲಕ ಎಲ್ಲ ವದಂತಿಗಳಿಗೆ ತೆರೆ ಎಳೆದಿದ್ದಾರೆ. ಸಾಮಾಜಿಕ ಮಾಧ್ಯಮದ ಮೂಲಕ ಜನತೆಗೆ ಈ ವಿಷಯ ತಿಳಿಸಿರುವ ಅವರು, ಕಳೆದ ಎರಡು ದಶಕಗಳಿಂದ ಬಿಹಾರದ ಜನತೆ ತಮ್ಮ ಮೇಲಿಟ್ಟಿರುವ ನಂಬಿಕೆ ಮತ್ತು ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ. ತಮ್ಮ ಸಂಸದೀಯ ಜೀವನದ ಆರಂಭದಿಂದಲೂ ರಾಜ್ಯ ಶಾಸಕಾಂಗದ

ಎರಡು ಸದನಗಳು ಹಾಗೂ ಸಂಸತ್ತಿನ ಸದಸ್ಯನಾಗಬೇಕೆಂಬ ಹಂಬಲವಿತ್ತು. ಈ ಹಿನ್ನೆಲೆಯಲ್ಲಿ ಈ ಬಾರಿ ರಾಜ್ಯಸಭೆಗೆ ಪ್ರವೇಶಿಸಲು ನಿರ್ಧರಿಸಿರುವುದಾಗಿ ತಿಳಿಸಿದ್ದಾರೆ.

**********

ಒಟ್ಟು ಹತ್ತು ರಾಜ್ಯಗಳ ೩೭ ರಾಜ್ಯಸಭಾ ಸ್ಥಾನಗಳಿಗೆ ನಡೆಯಲಿರುವ ದ್ವಿವಾರ್ಷಿಕ ಚುನಾವಣೆಯ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯು ಇಂದು ಮುಕ್ತಾಯಗೊಳ್ಳಲಿದೆ. ಚುನಾವಣಾ ವೇಳಾಪಟ್ಟಿಯ ಪ್ರಕಾರ, ಸಲ್ಲಿಕೆಯಾದ ನಾಮಪತ್ರಗಳ ಪರಿಶೀಲನೆಯು ನಾಳೆ ನಡೆಯಲಿದ್ದು, ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಲು ಇದೇ ೯ ರವರೆಗೆ ಕಾಲಾವಕಾಶವಿದೆ. ಈ ಎಲ್ಲಾ ಸ್ಥಾನಗಳಿಗೆ ಇದೇ ೧೬ರಂದು ಮತದಾನ ನಡೆಯಲಿದ್ದು, ಅದೇ ದಿನ ಸಂಜೆ ಫಲಿತಾಂಶವನ್ನು ಪ್ರಕಟಿಸಲಾಗುವುದು.

**********

ರಾಜ್ಯಸಭೆಯ ದ್ವೈವಾರ್ಷಿಕ ಚುನಾವಣೆಗಾಗಿ ಕಾಂಗ್ರೆಸ್ ಪಕ್ಷ ೬ ಅಭ್ಯರ್ಥಿಗಳ ಅಧಿಕೃತ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ವಿವಿಧ ರಾಜ್ಯಗಳ ಪ್ರಾತಿನಿಧ್ಯವನ್ನು ಗಮನದಲ್ಲಿಟ್ಟುಕೊಂಡು ಹಿರಿಯ ನಾಯಕರು ಹಾಗೂ ಅನುಭವಿ ಮುಖಂಡರಿಗೆ ಈ ಪಟ್ಟಿಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಪ್ರಮುಖವಾಗಿ ತೆಲಂಗಾಣ ರಾಜ್ಯದಿಂದ ಹಿರಿಯ ವಕೀಲ ಹಾಗೂ ಪಕ್ಷದ ಮುಖಂಡರಾದ ಅಭಿಷೇಕ್ ಮನುಸಿಂಘ್ವಿ ಮತ್ತು ವೇಮ್ ನರೇಂದರ್ ರೆಡ್ಡಿ ಅವರನ್ನು ನಾಮ ನಿರ್ದೇಶನ ಮಾಡಲಾಗಿದೆ.

**********

ಭಾರತದ ಬ್ಯಾಂಕಿಂಗ್ ಕಾರ್ಯಕ್ರಮಗಳು ಜಾಗತಿಕ ಮಟ್ಟದಲ್ಲಿ ಮಹಿಳೆಯರ ಮತ್ತು ಹೆಣ್ಣುಮಕ್ಕಳ ಸಬಲೀಕರಣಕ್ಕೆ ಒಂದು ಪರಿವರ್ತನಾ ಮಾದರಿಯಾಗಿ ಹೊರಹೊಮ್ಮಿದೆ ಎಂದು ವಿಶ್ವಸಂಸ್ಥೆ ಬಣ್ಣಿಸಿದೆ. ಭಾರತದ ಬ್ಯಾಂಕಿಂಗ್ ಕಾರ್ಯಕ್ರಮಗಳ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿರುವ ವಿಶ್ವಸಂಸ್ಥೆ, ಸುಮಾರು ೨೯ ಕೋಟಿಗೂ ಅಧಿಕ ಮಹಿಳೆಯರನ್ನು ಬ್ಯಾಂಕಿಂಗ್ ವ್ಯಾಪ್ತಿಗೆ ತಂದಿರುವ ಭಾರತದ ಸಾಧನೆ ವಿಶ್ವದ ಇತರ ರಾಷ್ಟ್ರಗಳಿಗೆ ಪರಿವರ್ತನಾ ಮಾದರಿಯಾಗಿದೆ ಎಂದು ಅಭಿಪ್ರಾಯಪಟ್ಟಿದೆ. ಈ ಕುರಿತು ಮಾತನಾಡಿರುವ ವಿಶ್ವಸಂಸ್ಥೆ ಮಹಿಳಾ ವಿಭಾಗದ ನೀತಿ ನಿರ್ದೇಶಕಿ ಸ್ಯಾಂಡ್ರ ಆಂಡ್ರಿಕ್ಸ್, ಮಹಿಳಾ ಸಮುದಾಯಕ್ಕೆ ಡಿಜಿಟಲ್ ಗುರುತಿನ ಸೌಲಭ್ಯವನ್ನು ಕಲ್ಪಿಸಿಕೊಟ್ಟಿರುವ

ಭಾರತ ಸರ್ಕಾರದ ಕ್ರಮ ಅತ್ಯಂತ ಗಮನಾರ್ಹವಾದುದು ಎಂದು ತಿಳಿಸಿದ್ದಾರೆ. ಮಹಿಳೆಯರಿಗಾಗಿ ಡಿಜಿಟಲ್ ಬ್ಯಾಂಕ್ ಖಾತೆ ತೆರೆಯಲು ವಿಧಿಸಲಾಗಿದ್ದ ನಿಯಮಗಳನ್ನು ಸರಳಗೊಳಿಸಿರುವುದು ಆರ್ಥಿಕ ಒಳಗೊಳ್ಳುವಿಕೆಯ ದೃಷ್ಟಿಯಿಂದ ಕ್ರಾಂತಿಕಾರಿ ಹೆಜ್ಜೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ೧೨ ವರ್ಷಕ್ಕೆ ಪಾದಾರ್ಪಣೆ ಮಾಡಿರುವ ಪ್ರಧಾನಮಂತ್ರಿ ಜನ್‌ಧನ್ ಯೋಜನೆಯಡಿ ತೆರೆಯಲಾದ ಒಟ್ಟು ಖಾತೆಗಳಲ್ಲಿ ಶೇಕಡ ೫೬ರಷ್ಟು ಪಾಲು ಮಹಿಳೆಯರದ್ದೇ ಆಗಿರುವುದು ಭಾರತದ ಆರ್ಥಿಕ ಸಬಲೀಕರಣದ ಯಶಸ್ಸನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ.

**********

ಕರ್ನಾಟಕದ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಶ್ರೀ ಕ್ಷೇತ್ರ ಯಡೂರಿನಲ್ಲಿ ಇಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ವೀರಭದ್ರೇಶ್ವರ ದೇವಾಲಯದ ರಾಜಗೋಪುರ ಉದ್ಘಾಟನೆ ಹಾಗೂ ಮಹಾಕುಂಭ ಅಭಿಷೇಕ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತ ಅಧ್ಯಾತ್ಮಿಕ ಪರಂಪರೆಯ ನೆಲೆಯಾಗಿದೆ. ಸಿಂಧೂ ಕಣಿವೆಯಿಂದ ಕನ್ಯಾಕುಮಾರಿವರೆಗೆ ಮುಂದರೆದ ಪ್ರಜ್ಞೆಯಾಗಿದೆ. ಭಗವದ್ಗೀತೆಯ ಅಧ್ಯಾತ್ಮಿಕ ಸಂದೇಶ ಧೈರ್ಯದಿಂದ ವರ್ತಿಸುವಂತೆ ಮತ್ತು ನಂಬಿಕೆಗೆ ಶರಣಾಗಲು ಪ್ರೇರಣೆಯಾಗಿದೆ ಎಂದರು. ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**********

ಇಸ್ರೇಲ್ ವಾಯುಪಡೆಯು ಇರಾನ್ ಮೇಲೆ ಮತ್ತೊಂದು ಹಂತದ ಭೀಕರ ದಾಳಿ ಆರಂಭಿಸಿದ್ದು, ಟೆಹ್ರಾನ್‌ನಾದ್ಯಂತ ಇರುವ ಇರಾನ್ ಆಡಳಿತದ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ವ್ಯಾಪಕ ದಾಳಿ ನಡೆಸಿದೆ. ಇದಕ್ಕೂ ಮುನ್ನ ಇಸ್ರೇಲ್ ಪಡೆಗಳು ಇರಾನ್‌ನ ಇಸ್ಫಹಾನ್ ಮತ್ತು ಕಾಮ್ ಪ್ರದೇಶಗಳಲ್ಲಿನ ಕ್ಷಿಪಣಿ ಉಡಾವಣಾ ಕೇಂದ್ರಗಳು ಮತ್ತು ರಕ್ಷಣಾ ವ್ಯವಸ್ಥೆಗಳ ಮೇಲೆ ದಾಳಿ ನಡೆಸಿದ್ದವು. ಇದೇ ವೇಳೆ ಲೆಬನಾನ್‌ನಲ್ಲಿರುವ ಹೆಜ್ಬುಲ್ಲಾ ಸಂಘಟನೆಯ ಹಲವು ನಿಯಂತ್ರಣ ಕೇಂದ್ರಗಳ ಮೇಲೆ ಇಸ್ರೇಲ್ ದಾಳಿ ನಡೆಸಿದೆ. ಈ ವೇಳೆ ಹೆಜ್ಬುಲ್ಲಾ ವಾಯು ಘಟಕದ ಪ್ರಮುಖ ಕೇಂದ್ರವೊಂದನ್ನು ದಾಳಿಯಲ್ಲಿ ಧ್ವಂಸಗೊಳಿಸಲಾಗಿದೆ.

**********

ಅಮೆರಿಕ ಮತ್ತು ಇಸ್ರೇಲ್ ಪಡೆಗಳು ನಡೆಸಿದ ಜಂಟಿ ದಾಳಿಯಲ್ಲಿ ಮೃತಪಟ್ಟ ಇರಾನ್‌ನ ಸರ್ವೋಚ್ಚ ನಾಯಕ ಅಯತುಲ್ಲಾ ಸಯ್ಯದ್ ಅಲಿ ಖಮೈನಿ ಅವರ ಪಾರ್ಥಿವ ಶರೀರವನ್ನು ಅಂತಿಮ ದರ್ಶನಕ್ಕಾಗಿ ಇರಿಸಲು ಟೆಹ್ರಾನ್‌ನ ಗ್ರ್ಯಾಂಡ್ ಮೊಸಲ್ಲಾದಲ್ಲಿ ಸಿದ್ಧತೆಗಳು ಸಾಗಿವೆ. ಸರ್ವೋಚ್ಚ ನಾಯಕನಿಗೆ ಗೌರವ ಸಲ್ಲಿಸಲು ನಿನ್ನೆ ಆರಂಭವಾಗಬೇಕಿದ್ದ ಮೂರು ದಿನಗಳ ಅಂತಿಮ ವಿದಾಯ ಸಮಾರಂಭ ಇರಾನ್, ಅಮೆರಿಕ, ಇಸ್ರೇಲ್ ಸಂಘರ್ಷದ ಕಾರಣದಿಂದಾಗಿ ಮುಂದೂಡಲ್ಪಟ್ಟಿತ್ತು.

**********

ನೇಪಾಳದಲ್ಲಿ ಹೊಸ ಸರ್ಕಾರದ ಆಯ್ಕೆಗೆ ಇಂದು ಮಹತ್ವದ ಮತದಾನ ನಡೆಯುತ್ತಿದೆ. ಸ್ಥಳೀಯ ಕಾಲಮಾನ ಬೆಳಿಗ್ಗೆ ೭ ಗಂಟೆಗೆ ಮತದಾನ ಆರಂಭವಾಗಿದ್ದು, ಸಂಜೆ ೫ ಗಂಟೆಯವರೆಗೆ ಸಾರ್ವಜನಿಕರು ತಮ್ಮ ಹಕ್ಕನ್ನು ಚಲಾಯಿಸಲು ಅವಕಾಶವಿರಲಿದೆ. ಕಳೆದ ವರ್ಷದ ಸೆಪ್ಟೆಂಬರ್‌ನಲ್ಲಿ ಭ್ರಷ್ಟಾಚಾರ ಮತ್ತು ಆಡಳಿತ ವಿರೋಧಿ ನೀತಿಗಳ ವಿರುದ್ಧ ನಡೆದ ಯುವ ನೇತೃತ್ವದ ಬೃಹತ್ ಪ್ರತಿಭಟನೆಯಲ್ಲಿ ೭೭ ಜನರು ಮೃತಪಟ್ಟು, ಅಂದಿನ ಸರ್ಕಾರ, ಅಧಿಕಾರದಿಂದ ಕೆಳಗಿಳಿದ ನಂತರ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದೆ.

**********

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಎರಡನೇ ಸೆಮಿಫೈನಲ್‌ನಲ್ಲಿ ಭಾರತ ತಂಡ, ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭ಕ್ಕೆ ಆರಂಭವಾಗಲಿದೆ. ಕೊಲ್ಕೊತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಕ್ರಿಕೆಟ್‌ನ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡದ ವಿರುದ್ಧ ನ್ಯೂಜಿಲೆಂಡ್ ತಂಡ ೯ ವಿಕೆಟ್‌ಗಳ ಜಯ ಸಾಧಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ. ಇಂದಿನ ಪಂದ್ಯದ ವಿಜೇತ ತಂಡ ಭಾನುವಾರ ಅಹಮದಾಬಾದ್‌ನಲ್ಲಿ ನಡೆಯುವ ಫೈನಲ್‌ನಲ್ಲಿ ನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ.